ಪ್ರಸ್ತುತವಾಗಿ ಅಂತರ್ಜಲ ಮರುಪೂರ್ಯೆಕೆ ರಚನೆಗಳ ನಿರ್ಮಾಣ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ.

ಜವಳಿ ಕೈಗಾರಿಕೆ ನಿಯಮ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 382(645)

ಸದಸ್ಯರ ಹೆಸರು : ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ)

ಉತ್ತರಿಸುವ ಸಚಿವರು : ಶ್ರೀ ಎಂ.ಮಹದೇವ್(ರೇಷ್ಮೆ ಮತ್ತು ಜವಳಿ ಸಚಿವರು)

ಪ್ರಶ್ನೆ

ಅ) ಜವಳಿ ಕನ್‌ಕರೆಂಟ್ ಲಿಸ್ಟ್‌ನಲ್ಲಿದ್ದರೂ ಸಹ ರಾಜ್ಯಗಳ ಗಮನಕ್ಕೆ ತರದೇ ಬೆಲೆ ಆಮದು ಮತ್ತು ರಫ್ತು ಮಾರುಕಟ್ಟೆ ನೀತಿಯನ್ನು ಜಾರಿಗೆ ತರಲು ಕೇಂದ್ರ ಸರ್ಕಾರ ಅನೇಕ ನಿರ್ಬಂಧ ಹೇರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮ ಏನು?

ಉತ್ತರ

ಅ) ಜವಳಿ ಕನ್‌ಕರೆಂಟ್ ಲಿಸ್ಟ್‌ನಲ್ಲಿದ್ದರೂ ಸಹ ಕೈಗಾರಿಕಾ ಅಭಿವೃದ್ಧಿ ಹಾಗೂ ನಿಯಂತ್ರಣ ಕಾಯ್ದೆಯನ್ವಯ ಜವಳಿ ಕೈಗಾರಿಕೆಗೆ ಸಂಬಂಧಿಸಿದಂತೆ ನೀತಿ ರೂಪಿಸುವ ಅಧಿಕಾರವು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ. ಆದ್ದರಿಂದ, ಆಮದು ಮತ್ತು ರಫ್ತು ಕುರಿತು ನಿಯಮ ರೂಪಿಸುವುದು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತದೆ.

ಜವಳಿ ಉದ್ದಿಮೆ ಬೆಳವಣಿಗೆಗೆ ಕ್ರಮ ಕೈಗೊಳ್ಳುವ ಅಧಿಕಾರ ಮಾತ್ರ ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿದೆ. ಕೇಂದ್ರ ಸರ್ಕಾರದ ಜವಳಿ ನೀತಿ 2000-ರಂತೆ ಎಲ್ಲಾ ನಿರ್ಬಂಧಗಳನ್ನು ತೆಗೆದು ಹಾಕಲಾಗಿದೆ.

ಆ) ಉದ್ಭವಿಸುವುದಿಲ್ಲ.

ಮೈಸೂರು ತಾಲ್ಲೂಕಿನ ಕೈಗಾರಿಕಾ ವಿವರ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 383(646)

ಸದಸ್ಯರ ಹೆಸರು : ಶ್ರೀ ಗುರುಸ್ವಾಮಿ ಎ.ಎಸ್.(ಚಾಮುಂಡೇಶ್ವರಿ)

ಉತ್ತರಿಸುವ ಸಚಿವರು : ಶ್ರೀ ಆರ್.ವಿ. ದೇಶಪಾಂಡೆ(ಭಾರಿ ಮತ್ತು ಮಧ್ಯಮ ಕೈಗಾರಿಕೆ ಸಚಿವರು)

ಪ್ರಶ್ನೆ

ಅ. ಮೈಸೂರು ತಾಲ್ಲೂಕಿನಲ್ಲಿರುವ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳೆಷ್ಟು?

ಆ. ಕಳೆದ ಎರಡು ವರ್ಷದ ಅವಧಿಯಲ್ಲಿ ಮುಚ್ಚಿರುವ ಘಟಕಗಳೆಷ್ಟು?

ಇ. ಮುಚ್ಚಿರುವ ಘಟಕಗಳನ್ನು ತೆರೆಯಲು ಏನು ಕ್ರಮಕೈಗೊಳ್ಳಲಾಗಿದೆ.

ಉತ್ತರ

ಅ. ಮೈಸೂರು ತಾಲ್ಲೂಕಿನಲ್ಲಿ 77 ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಇರುತ್ತವೆ.

ಆ. ಕಳೆದ ಎರಡು ವರ್ಷಗಳಲ್ಲಿ 2 ಘಟಕಗಳು ಮುಚ್ಚಿರುತ್ತವೆ.

ಇ. ಘಟಕಗಳ ಪುನರಾರಂಭಕ್ಕೆ ಪ್ರಯತ್ನಿಸಲಾಗುತ್ತಿದೆ.

ಪರಿಶಿಷ್ಟ ವರ್ಗದ ತಾಂಡಾಗಳ ಅಭಿವೃದ್ಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 384(200)

ಸದಸ್ಯರ ಹೆಸರು : ಶ್ರೀ ಹನುಮೇಗೌಡ ಕೆ.ಹೆಚ್.(ಹಾಸನ)

ಸಚಿವರ ಹೆಸರು ಮತ್ತು ಪದನಾಮ : ಶ್ರೀ ಕಾಗೋಡು ತಿಮ್ಮಪ್ಪ(ಸಮಾಜ ಕಲ್ಯಾಣ ಸಚಿವರು)

ಪ್ರಶ್ನೆ

ಅ. ಕೇಂದ್ರ ಸರ್ಕಾರದ ಅನುದಾನದಿಂದ ಪರಿಶಿಷ್ಟ ವರ್ಗದ ತಾಂಡವನ್ನು ಅಭಿವೃದ್ಧಿಪಡಿಸುತ್ತಿರುವುದು ಸರಿಯಷ್ಟೆ ಆದರೆ ಹಾಸನ ವಿಧಾನಸಭಾ ಕ್ಷೇತ್ರ ತಾಂಡಾಗಳಾದ ಹಿರೇಗೌಡನಹಳ್ಳಿ ಹಾಗೂ ಜಾಗರವಳ್ಳಿ ಗ್ರಾಮಗಳಿಗೆ ಭೇಟಿ ನೀಡಿ, ಬೇಕಾಗುವ ಅಭಿವೃದ್ಧಿ ಕೆಲಸಗಳ ಪಟ್ಟಿ ಮಾಡಿ, ಅಂದಾಜು ತಯಾರಿಸಿ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳ ಮೂಲಕ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಗಿದ್ದರೂ ಈ